# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1626 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.12.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು: (ವಿವರಗಳನ್ನು ಒದಗಿಸುವುದು)</td><td>ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ಜಿಲ್ಲೆ</th><th>ಗ್ರಾಮ ಪಂಚಾಯಿತಿಗಳ ಸಂಖ್ಯೆ</th></tr>
<tr><td>1.</td><td>ಮೈಸೂರು</td><td>256</td></tr>
<tr><td>2.</td><td>ಚಾಮರಾಜನಗರ</td><td>130</td></tr>
<tr><td colspan="2">ಒಟ್ಟು</td><td>386</td></tr>
</table></td></tr>
<tr><td>(ಆ)</td><td>ಈ ಎಲ್ಲಾ ಪಂಚಾಯತಿಗಳಿಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆಯೇ; ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆಗೆ ಕಾರಣಗಳೇನು;</td><td>ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳಿಗೆ ಮಂಜೂರಾಗಿರುವ, ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ಜಿಲ್ಲೆ</th><th>ಮಂಜೂರಾದ ಹುದೆಗಳ ಸಂಖ್ಯೆ</th><th>ಭರ್ತಿಯಾದ ಹುದ್ದೆಗಳ ಸಂಖ್ಯೆ</th><th>ಖಾಲಿ ಇರುವ ಹುದ್ದೆಗಳ ಸಂಖ್ಯೆ:</th></tr>
<tr><td>1.</td><td>ಮೈಸೂರು</td><td>256</td><td>253</td><td>03</td></tr>
<tr><td>2.</td><td>ಚಾಮರಾಜನಗರ</td><td>130</td><td>105</td><td>25</td></tr>
</table>
ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವಯೋನಿವೃತ್ತಿ, ರಾಜೀನಾಮೆ, ಸ್ವಯಂ ನಿವೃತ್ತಿ ಮತ್ತು ಮರಣದಿಂದಾಗಿ ಹುದ್ದೆಗಳು ಖಾಲಿ ಇರುತ್ತವೆ.</td></tr>
<tr><td>(ಇ)</td><td>ಪ್ರತಿ ಪಂಚಾಯಿತಿಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ನೇಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?</td><td>1. ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಪೈಕಿ ಉಳಿಕೆ ಮೂಲ ವೃಂದದ 150 ಮತ್ತು ಕಲ್ಯಾಣ ಕರ್ನಾಟಕ ವೃಂದದ 97 ಸೇರಿದಂತೆ ಒಟ್ಟು 247 ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ದಿನಾಂಕ:15.03.2024 ರಂದು ಅಧಿಸೂಚನೆಯನ್ನು ಮತ್ತು 17-09-2024 ರಲ್ಲಿ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದು, ದಿನಾಂಕ:16.11.2024 ಮತ್ತು 17.11.2024ರಂದು ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಹಾಗೂ ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ದಿನಾಂಕ:07.12.2024 ಮತ್ತು 08.12.2024ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗಿರುತ್ತದೆ.</td></tr>
</table>

| | | |
|---|---|---|
| | | 2. ಮುಂದುವರೆದು, ದಾಖಲೆಗಳ ಪರಿಶೀಲನೆಗಾಗಿ 1:3 ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕಲ್ಯಾಣ ಕರ್ನಾಟಕ ವೃಂದಕ್ಕೆ ಸಂಬಂಧಿಸಿದಂತೆ ದಿನಾಂಕ:08-07-2025 ರಂದು ಮತ್ತು ಉಳಿಕೆ ಮೂಲ ವೃಂದಕ್ಕೆ ಸಂಬಂಧಿಸಿದಂತೆ 20-08-2025 ರಂದು ಪ್ರಕಟಿಸಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಬಾಕಿ ಇರುತ್ತದೆ. ನೇಮಕಾತಿ ಪಕ್ರಿಯ ಪ್ರಗತಿಯಲ್ಲಿರುತ್ತದೆ.<br><br>3. ಮುಂಬಡ್ತಿ ಕೋಟಾದಡಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಸಂಬಂಧಿಸಿದಂತೆ, ದಿನಾಂಕ:01.01.2025ರಲ್ಲಿದ್ದಂತೆ ಗ್ರಾಮ ಪಂಚಾಯತಿ ಕಾರ್ಯದರ್ಶಿ (ಗ್ರೇಡ್-1) ವೃಂದದ ರಾಜ್ಯ ಮಟ್ಟದ ಕರಡು ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿರುತ್ತದೆ. ರಾಜ್ಯ ಮಟ್ಟದ ಅಂತಿಮ ಜ್ಯೇಷ್ಠತಾ ಪಟ್ಟಿ ಪ್ರಕಟಿಸಲು ಪರಿಶೀಲನೆಯಲ್ಲಿದ್ದು, ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಆನಂತರದಲ್ಲಿ ಭರ್ತಿ ಮಾಡಬೇಕಿರುತ್ತದೆ. |

ಸಂಖ್ಯೆ: ಗ್ರಾಅಪ 1023 ಗ್ರಾಪಂಅ 2025

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.